ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು
ಸಿ.ಸಿ.ನಂ.**3363/2023.**

ದಿನಾಂಕಃ**09.06.2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು

| | | |
|---|---|---|
| ಸಾಕ್ಷಿಯ ಹೆಸರು | ಮಂಜುನಾಥ | ಚಾಸಾ-3, ಪ್ರಾಸಾ-6 |
| ತಂದೆಯ ಹೆಸರು | ಮಹೇಶ್ವರಪ್ಪ | |
| ವಯಸ್ಸು | 32 ವರ್ಷ | |
| ಉದ್ಯೋಗ | ಖಾಸಗಿ ಕೆಲಸ | |
| ವಾಸ | ದಾವಣಗೆರೆ | |

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಿಪಿ 1 ಮತ್ತು 2 ರಲ್ಲಿರುವ ಸಹಿಯು ನನ್ನದು, ಸದರಿ ಸಹಿಗಳನ್ನು ಕ್ರಮವಾಗಿ ನಿಪಿ1 ಸಿ ಮತ್ತು 2 ಡಿ ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಗೆದ್ಲೆಹಳ್ಳಿ ಗ್ರಾಮದ ಮುಖ್ಯ ರಸ್ತೆಯಲ್ಲಿ ಸುಮಾರು 3 ವರ್ಷದ ಹಿಂದೆ ಸಂಜೆ 7 ಗಂಟೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ 1, 2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನಿಪಿ 3 ರಲ್ಲಿ ಸಾಕ್ಷಿಯು ತನ್ನ ಇರುವಿಕೆಯನ್ನು ನೋಡಿ ಗುರುತಿಸಿದರು. ನಿಪಿ 3 ನ್ನು ಸದರಿ ಸ್ಥಳದಲ್ಲಿ ತೆಗೆದಿದ್ದು ಆದರೆ ಏಕೆ ತೆಗೆಯಲಾಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಸ್ವತ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಸದರಿ ಸಹಿಗಳನ್ನು ಪೊಲೀಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ.

**(**ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**)**

ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ದಿಃ18.03.2023 ರಂದು ರಾತ್ರಿ 8.50 ಗಂಟೆಯ ಸಮಯದಲ್ಲಿ ಆರೋಪಿಯ ವಿರುದ್ಧ ದಾಳಿಗೆ ಸಹಕರಿಸುವಂತೆ ಕೋರಿ ನಿಪಿ 1 ರಂತೆ ನನಗೆ ನೋಟೀಸು ನೀಡಿ ನಿಪಿ 1 ಸಿ ರಂತೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ರಾತ್ರಿ 10 ರಿಂದ 10.45 ರಲ್ಲಿ ನನ್ನ ಮತ್ತು ಚಾಸಾ 2 ರವರ ಸಮಕ್ಷಮ ನಿಪಿ2 ರಂತೆ ಮಹಜರ್ ಮಾಡಿ ಓದಿ ಹೇಳಿ

ನಿಮ್ಮ ಸಹಿ ನಿಪಿ2 ಡಿ ರಂತೆ ಪಡೆದರು ಎಂದರೆ ಸರಿಯಲ್ಲ. ನಿಪಿ3 ಫೋಟೋವನ್ನು ನಿಪಿ 2 ರಂತೆ ಅಮಾನತ್ತು ಪಂಚನಾಮೆ ಮಾಡಿದ ವೇಳೆಯಲ್ಲಿ ತೆಗೆಯಲಾಗಿದೆ ಎಂದರೆ ನನಗೆ ಗೊತ್ತಿಲ್ಲ. ಮು.ಮಾ.1 ಮತ್ತು 2 ನ್ನು ನಿಪಿ2 ರ ಕಾಲಕ್ಕೆ ನನ್ನ ಸಮಕ್ಷಮ ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ1, 2 ರಲ್ಲಿ ಬರೆದಿರುವ ವಿಚಾರ, ನಿಪಿ 3 ರ ಫೋಟೋ ತೆಗೆದ ವಿಚಾರ ಹಾಗೂ ಮು ಮಾ 1 ಮತ್ತು 2 ನ್ನು ಅಮಾನತ್ತು ಪಡಿಸಿಕೊಂಡ ವಿಚಾರ ನನಗೆ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ ಆರೋಪಿ ಪರ ಶ್ರೀ ಎಸ್ ಎನ್ ಎ ವಕೀಲರಿಂದ ಃಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಒ,

ಸಹಿ/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.